ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಬುಧವಾರ, ದಿನಾಂಕ **:** 03 ನೇ ಫೆಬ್ರುವರಿ, 2021

ಪೋಡಿ ಮುಕ್ತ ಗ್ರಾಮ ಯೋಜನೆ ಬಗ್ಗೆ

ಶ್ರೀ ಆರ್.ಬಿ. ತಿಮ್ಮಾಪುರ (ವಿಧಾನಸಭೆಯಿಂದ ಚುನಾಯಿತರಾದವರು) :-

306 (373) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪೋಡಿ ಮುಕ್ತ ಗ್ರಾಮ ಮಾಡುವ ಯೋಜನೆಯು ಯಾವ ಹಂತದಲ್ಲಿದೆ; 2018-19ನೇ ಸಾಲಿನಿಂದ 2020-21ನೇ ಸಾಲಿನ ಅವಧಿಯಲ್ಲಿ ಬಾಗಲಕೋಟೆ ಜಿಲ್ಲೆಯಲ್ಲಿನ ಯಾವ ಯಾವ ಭಾಗಗಳಲ್ಲಿ ಈ ಯೋಜನೆಯನ್ನು ಜಾರಿಗೊಳಿಸಲಾಗಿದೆ;

(ಆ) ಮೋಜಿನಿ ಹಾಗೂ ಪೋಡಿಗಾಗಿ ಬಾಕಿ ಇರುವ ಪ್ರಕರಣಗಳ ಸಂಖ್ಯೆ ಎಷ್ಟು; ಎಷ್ಟು ದಿನಗಳಿಂದ ಬಾಕಿ ಉಳಿದಿರುತ್ತದೆ; ವಿಳಂಬಕ್ಕೆ ಕಾರಣಗಳೇನು; (ತಾಲ್ಲೂಕುವಾರು ವಿವರ ಒದಗಿಸುವುದು)

(ಇ) ಅವುಗಳನ್ನು ಇತ್ಯರ್ಥಗೊಳಿಸುª À ಉದ್ದೇಶವು ಸರ್ಕಾರದ ಗಮನದಲ್ಲಿದೆಯೇ; ಇದ್ದಲ್ಲಿ, ಯಾವಾಗ ಇತ್ಯರ್ಥಗೊಳಿಸಲಾಗುವುದು?